# ಅಪರ ಮುಖ್ಯ ಕಾರ್ಯದರ್ಶಿಯವರ ಕಛೇರಿ
## ಉನ್ನತ ಶಿಕ್ಷಣ ಇಲಾಖೆ
## OFFICE OF THE ADDITIONAL CHIEF SECRETARY
## HIGHER EDUCATION DEPARTMENT

ಸಂ.ಇಡಿ ದಿನಾಂಕ:05-06-2020

### ಸುತ್ತೋಲೆ

ಭಾರತ ಸರ್ಕಾರದ ಗೃಹ ಮಂತ್ರಾಲಯವು ಪತ್ರ ಸಂಖ್ಯೆ:40-3/2020-DM-I(A),ದಿನಾಂಕ: 30.06.2020 ರಲ್ಲಿ ತಿಳಿಸಿರುವ ಮಾರ್ಗಸೂಚಿಗಳಲ್ಲಿ ರಾಜ್ಯ / ಕೇಂದ್ರಾಡಳಿತ ಪ್ರದೇಶಗಳ ಜೊತೆ ಸಮಾಲೋಚನೆ ನಡೆಸಿ ಕಾಲೇಜು ಮತ್ತು ಇತರೆ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವುದರ ಕುರಿತು ನಿರ್ಧಾರ ಕೈಗೊಳ್ಳಲಾಗುವುದೆಂದು ಸೂಚಿಸಿದೆ. ರಾಜ್ಯ ಸರ್ಕಾರಗಳು ಸಾಂಸ್ಥಿಕ ಹಂತದಲ್ಲಿ ಪಾಲಕರು ಮತ್ತು ಮಧ್ಯಸ್ಥಗಾರ (Stake holders) ರೊಂದಿಗೆ ಸಮಾಲೋಚನೆ ನಡೆಸಬಹುದೆಂದು ತಿಳಿಸಿದೆ. ಅವರುಗಳ ಅಭಿಪ್ರಾಯವನ್ನು ಆಧರಿಸಿ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವುದರ ಕುರಿತು ಜುಲೈ, 2020 ರ ಮಾಹೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು.

ಯು.ಜಿ.ಸಿ ಮತ್ತು ಕೇಂದ್ರ ಗೃಹ ಮಂತ್ರಾಲಯ ಹೊರಡಿಸಿರುವ ಮಾರ್ಗಸೂಚಿಗಳ ಹಿನ್ನೆಲೆಯಲ್ಲಿ ದಿನಾಂಕ: 01-06-2020 ರಂದು ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯದ ಸಾಂಪ್ರದಾಯಿಕ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ಕುಲಪತಿಗಳೊಂದಿಗೆ ಸಭೆಯನ್ನು ವಿಡಿಯೋ ಕಾನ್ಫರೆನ್ಸ್ ಮುಖೇನ ನಡೆಸಲಾಯಿತು. ಸದರಿ ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಮತ್ತು ಉನ್ನತ ಶಿಕ್ಷಣ ಪರಿಷತ್ತಿನ ಕಾರ್ಯನಿರ್ವಾಹಕ ನಿರ್ದೇಶಕರು ಉಪಸ್ಥಿತರಿದ್ದರು. ಸಭೆಯಲ್ಲಿ ಚರ್ಚಿಸಿದಂತೆ ಬಾಕಿ ಉಳಿದ ಪಠ್ಯಕ್ರಮವನ್ನು ಪೂರ್ಣಗೊಳಿಸಲು ರಾಜ್ಯದ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಜೂನ್ 15, 2020 ರವರೆಗೆ ಆನ್‌ಲೈನ್ ಮೂಲಕ ನಡೆಸಲಾಗುವ ತರಗತಿಗಳನ್ನು ಮುಂದುವರೆಸಿ ಪೂರ್ಣಗೊಳಿಸಲು ಮತ್ತು ಬೋಧಕ ಸಿಬ್ಬಂದಿಗೆ ಜೂನ್ 16, 2020 ರಿಂದ ಜೂನ್ 30 ರವರೆಗೆ ರಜಾ ಘೋಷಿಸಲು ಸೂಚಿಸಿದೆ.

ಯು.ಜಿ.ಸಿ ಮತ್ತು ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಜೂನ್ 2020 ರ ಕೊನೆಯ ವಾರದಲ್ಲಿ ಹೊಸ ಮಾರ್ಗಸೂಚಿಗಳನ್ನು ಹೊರಡಿಸುವ ನಿರೀಕ್ಷೆ ಇದೆ. ಈ ಮಧ್ಯೆ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳು, ಪೋಷಕರು ಮತ್ತು ಅಧ್ಯಾಪಕರುಗಳಿಂದ ಪರೀಕ್ಷೆಗಳನ್ನು ನಡೆಸುವುದರ ಕುರಿತು, ಮೌಲ್ಯಮಾಪನ ಮತ್ತು ವಿದ್ಯಾಸಂಸ್ಥೆಗಳನ್ನು ಪುನರಾರಂಭಿಸುವ ಬಗ್ಗೆ ಅಭಿಪ್ರಾಯಗಳನ್ನು ಸಂಗ್ರಹಿಸಲು ಸೂಚಿಸಿದೆ.

ಕೇಂದ್ರ ಸರ್ಕಾರದ ಗೃಹ ಮಂತ್ರಾಲಯ ಮತ್ತು ಯು.ಜಿ.ಸಿ ಹೊರಡಿಸುವ ಮಾರ್ಗಸೂಚಿಗಳನ್ವಯ ಜೂನ್, 2020 ರ ಕೊನೆಯ ವಾರದಲ್ಲಿ ಮುಂದಿನ ಕ್ರಮಗಳ ಕುರಿತು ಮಾಹಿತಿ ನೀಡಲಾಗುವುದು.

(ಡಾ: ಇ.ವಿ. ರಮಣ ರೆಡ್ಡಿ) 6.6.2020
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ ಉನ್ನತ ಶಿಕ್ಷಣ ಇಲಾಖೆ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು.ದಿನಾಂಕ:15-06-2020.

ದಿನಾಂಕ:05-06-2020ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಉನ್ನತ ಶಿಕ್ಷಣ ಇಲಾಖೆ, ಇವರು ಹೊರಡಿಸಿರುವ ಸುತ್ತೋಲೆಯಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ವಯ ಮುಂದಿನ ಕ್ರಮ ವಹಿಸಲು ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು.

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.